ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ರೀ ಸರ್ವೆ ದುರಸ್ತಿ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

37 (295) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಳೆದ 3 ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ರೀ ಸರ್ವೆ ದುರಸ್ತಿಗಾಗಿ ಸ್ವೀಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಆತಗೂರು ಹೋಬಳಿ, ಕುಂದನಕುಪ್ಪೆ ಗ್ರಾಮದಲ್ಲಿನ ರೈತರ ಜಮೀನುಗಳಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ನ್ಯಾಯಾಲಯದಿಂದ 2019ರಲ್ಲಿ ರೀ ಸರ್ವೆ ದುರಸ್ತಿಗೆ ಆದೇಶವಾಗಿರುವ ಪ್ರಕರಣಗಳೆಷ್ಟು ; (ಸರ್ವೆ ನಂಬರ್‌ವಾರು ಮಾಹಿತಿ ಒದಗಿಸುವುದು)

(ಇ) ಸದರಿ ಜಿಲ್ಲಾಧಿಕಾರಿಗಳ ನ್ಯಾಯಾಲಯದ ಆದೇಶದಂತೆ ಕ್ರಮ ಕೈಗೊಂಡ ಪ್ರಕರಣಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಜಿಲ್ಲಾಧಿಕಾರಿಯವರ ನ್ಯಾಯಾಲಯದ ಆದೇಶವಿದ್ದರೂ ಕೂಡ ಇದುವರೆಗೆ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ;

(ಉ) ಇದುವರೆವಿಗೂ, ಈ ಬಗ್ಗೆ ಕ್ರಮ ವಹಿಸದ ಅಧಿಕಾರಿಗಳ ವಿರುದ್ಧ ಕೈಗೊಳ್ಳಲಾಗುವ ಕ್ರಮಗಳೇನು ?